ದಿನಾಂಕ: 18-08-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಬಿ.ಎಲ್ ವಾದಿ ಪರ ವಕೀಲರಿಂದಃ

ನನ್ನ ಸಾಕ್ಷಿ ಹೇಳಿಕೆಯ ಭಾಗವಾಗಿ ಪ್ರಮಾಣಪತ್ರವನ್ನು ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತದೆ. ಅದನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ದಿನಾಂಕ 05-03-1987 ರ 4 ಪುಟಗಳ ಕ್ರಯ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು.

ದಿನಾಂಕ 05-03-1987 ರ 2 ಪುಟಗಳ ಕ್ರಯ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು.

ಎರಡು Assessment extract ಗಳ ದೃಢಿಕೃತ ನಕಲುಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-3 ಮತ್ತು 4 ಎಂದು ಗುರುತಿಸಲಾಯಿತು.

ಎರಡು ಕಂದಾಯ ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-5 ಮತ್ತು 6 ಎಂದು ಗುರುತಿಸಲಾಯಿತು.

ಒಂದು ಋಣಭಾರ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು.

ದಿನಾಂಕ 07-08-2016 ರಂದು ಮಂಚೇನಹಳ್ಳಿ ಪೊಲೀಸ್ ಠಾಣೆಯ ಆರಕ್ಷಕ ಉಪ ನಿರೀಕ್ಷಕರು ನೀಡಿರುವ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಎಂದು ಗುರುತಿಸಲಾಯಿತು.

ಮಂಚೇನಹಳ್ಳಿ ಗ್ರಾಮ ಪಂಚಾಯಿತಿಯ ಪಿ.ಡಿ.ಓ ರವರಿಗೆ ನೀಡಿರುವ 4 ಪತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-9 ರಿಂದ 12 ಎಂದು ಗುರುತಿಸಲಾಯಿತು.

3 ಛಾಯಾ ಚಿತ್ರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-13 ರಿಂದ 15 ಎಂದು ಗುರುತಿಸಲಾಯಿತು.

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯ ಹಾಗೂ ದಾಸ್ತಾವೇಜುಗಳನ್ನು ಪರಿಶೀಲಿಸಿ ನನ್ನ ದಾವೆಯನ್ನು ಪುರಸ್ಕರಿಸಿ ನನ್ನ ದಾವೆಯಲ್ಲಿ ಕೋರಿರುವಂತೆ ಡಿಕ್ರಿ ಮಾಡಬೇಕೆಂದು ಕೋರುತ್ತೇನೆ.

**(**ಪ್ರತಿವಾದಿಗಳ ಪರ ವಕೀಲರು ಗೈರು ಹಾಜರಿದ್ದು ಪಾಟೀ ಸವಾಲಿಗೆ ಕಾಲಾವಕಾಶ ನೀಡಲಾಯಿತು**.)**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ. ಇದೆ

ಸಹಿ/-
ಪ್ರ.ಸಿ.ನ್ಯಾ ಮತ್ತು ಜೆಎಂಎಫ್‌ಸಿ,
ಗೌರಿಬಿದನೂರು